ಮೇವುಂಡಿ ಕುಡಿಯುವ ನೀರಿನ ಯೋಜನೆ

35 - ಶ್ರೀ ಗಡ್ಡದೇವರಮಠ ಗದ್ದಯ್ಯ ಶಿವಮೂರ್ತಯ್ಯ (ಶಿರಹಟ್ಟಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮೇವುಂಡಿ ಕುಡಿಯುವ ನೀರಿನ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು?*

ಆ) *ಈ ಯೋಜನೆಯನ್ನು ಪೂರ್ಣಗೊಳಿಸಲಾಗಿದೆಯೇ?*

ಇ) *ಇಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು?*

ಈ) *ಈ ಯೋಜನೆ ಪೂರ್ಣಗೊಳಿಸಲು ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳುವುದೆ?*

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಮುಂಡರಗಿ ತಾ : ಮೇವುಂಡಿ ಗ್ರಾಮಕ್ಕೆ ಕೊಳವೆನೀರು ಸರಬರಾಜು ಯೋಜನೆಯನ್ನು ಮಾರ್ಚ್-88ರಲ್ಲಿ ಕಾರ್ಯಗತಗೊಳಿಸಲಾಗಿದ್ದು, ಸದರಿ ಯೋಜನೆಯ ನೀರಿನಲ್ಲಿ ಅಧಿಕ ಫ್ಲೋರೈಡ್ ಕಂಡುಬಂದಿದ್ದರಿಂದ, ಸದರಿ ಗ್ರಾಮದಲ್ಲಿ ಡಿ-ಫ್ಲೋರಿಡೇಶನ್ ಸ್ಥಾವರವನ್ನು ಸ್ಥಾಪಿಸುವ ಕೆಲಸವನ್ನು ನೀರಿನ ತಾಂತ್ರಿಕ ನಿಯೋಗದಡಿ ಮಾರ್ಚ್-90ರಲ್ಲಿ ಪ್ರಾರಂಭಿಸಿ ಮಾರ್ಚ್-95ರಲ್ಲಿ ಪೂರ್ಣಗೊಳಿಸಲಾಗಿದೆ. ಅಲ್ಲದೆ, ಸದರಿ ಗ್ರಾಮಕ್ಕೆ ಗದಗ-ಬೆಟಗೇರಿ ನೀರು ಸರಬರಾಜು ಕೊಳವೆ ಮಾರ್ಗದಿಂದ ಶುದ್ಧೀಕರಿಸಿದ ನೀರನ್ನು ಒದಗಿಸಲಾಗುತ್ತಿದೆ.

ಆ) ಯೋಜನೆಯನ್ನು ಪೂರ್ಣಗೊಳಿಸಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ನೆದರ್‌ಲ್ಯಾಂಡ್ ಯೋಜನೆಯಡಿಯಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯಗತ ಗೊಳಿಸುವುದು

36 - ಶ್ರೀ ಬಿ.ಆರ್. ಯಾವಗಲ್ (ನರಗುಂದ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನೆದರ್‌ಲ್ಯಾಂಡ್ ದೇಶದ ಸಹಾಯದಿಂದ ರಾಜ್ಯದಲ್ಲಿ ನಿರ್ಮಾಣವಾಗುತ್ತಿರುವ ಕುಡಿಯುವ ನೀರಿನ ಯೋಜನೆಗಳು ಯಾವುವು ? ಹಾಗೂ ಇವುಗಳ ಒಟ್ಟು ಅಂದಾಜು ವೆಚ್ಚವೆಷ್ಟು? ಹಾಗೂ ಇಲ್ಲಿಯವರೆಗೆ ಆದಂತಹ ವೆಚ್ಚವೆಷ್ಟು?*

ಆ) *ನರಗುಂದ ಮತಕ್ಷೇತ್ರದಲ್ಲಿ ಈ ಯೋಜನೆಯ ಅಡಿಯಲ್ಲಿ ಎಷ್ಟು ಹಳ್ಳಿಗಳಿಗೆ ಕುಡಿಯುವ ನೀರಿನ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತಿದೆ? ಇಲ್ಲಿಯವರೆಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ?*